**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಡಾ|| ವೈ.ಎ. ನಾರಾಯಣ ಸ್ವಾಮಿ ಇವರು ನಿಯಮ 330 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ**

**ಪ್ರಸ್ತಾಪಿಸಿರುವ ವಿಷಯ:**

"ಎನ್.ಪಿ.ಎಸ್. ಬದಲಾಗಿ ಒ.ಪಿ.ಎಸ್.

ಸರ್ಕಾರಿ ಮತ್ತು ಅನುದಾನಿತ ಶಾಲಾ ಶಿಕ್ಷಕರು/ನೌಕರರಿಗೆ ನೀಡುತ್ತಿರುವ ಹಾಲಿ ಪಿಂಚಣಿ ಪದ್ಧತಿಯಿಂದ ಬಹಳ ತೊಂದರೆಗಳಾಗುತ್ತಿದ್ದು, ನಿವೃತ್ತಿಯಿಂದ ಹಾಗೂ ಅಕಾಲಿಕ ಮರಣ ಹೊಂದಿದ ಶಿಕ್ಷಕರು/ನೌಕರರಿಗೆ ನ್ಯಾಯಯುತವಾದ ಪಿಂಚಣಿಯು ದೊರಕದೇ ಇರುವುದರಿಂದ ಆಗುತ್ತಿರುವ ಅನಾಹುತಗಳ ಬಗ್ಗೆ ಸದನದಲ್ಲಿ ಚರ್ಚಿಸ ಬಯಸುತ್ತೇನೆ".

**ಉತ್ತರ:**

ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.

ರಾಜ್ಯದ ಸ್ವಾಯತ್ತ ಸಂಸ್ಥೆಗಳು, ನಿಗಮ-ಮಂಡಳಿಗಳು, ಸಂಘಗಳು, ವಿಶ್ವವಿದ್ಯಾನಿಲಯಗಳು, ರಾಜ್ಯದ ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೂ ಸಹ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ: 01.04.2006 ರಿಂದ ಜಾರಿಗೆ ಬರುವಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ (ವಿ) 209 ಪಿಇಎನ್ 2012, ದಿನಾಂಕ: 21.02.2015ರಲ್ಲಿ ವಿಸ್ತರಿಸಲಾಗಿದೆ.

ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ.

ಸಂಖ್ಯೆ:ಆಇ-ಪಿಇಎನ್/ 74 /2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAGADEESHA, CMO-JS(GJ), JOINT SECREATRY, CMO on 09/03/2022 12:04 PM